ಅದಲ್ಲದೆ ಮಿನಿ ವಿಧಾನ ಸೌಧಗಳ ನಿರ್ಮಾಣಕ್ಕಾಗಿ ಅಗತ್ಯ ಸಂಪನ್ಮೂಲಗಳ ವ್ಯವಸ್ಥೆಯ ಬಗ್ಗೆ ಸರ್ಕಾರವು ಕ್ರಮ ಜರುಗಿಸುತ್ತಿದೆ. ಸೂಕ್ತ ನಿವೇಶನ ಹಾಗೂ ಸಂಪನ್ಮೂಲಗಳ ವ್ಯವಸ್ಥೆ ಆಗುತ್ತಲೇ ಮುದ್ದೇಬಿಹಾಳದಲ್ಲಿ ಮಿನಿ ವಿಧಾನ ಸೌಧ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುವುದು.

676(1346) ಶ್ರೀ (ಅಪ್ಪಾಜಿ) ಚನ್ನಬಸವರಾಜ್ ಶಂಕರ್‌ರಾವ್ ನಾಡಗೌಡರ್ (ಮುದ್ದೇಬಿಹಾಳ): ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ಮೇಲಿಂದ ಮೇಲೆ ಟ್ರಾನ್ಸ್‌ಫಾರ್ಮರ್‌ಗಳು ಹಾಳಾಗಿ ದುರಸ್ತಿಗೆ ಒಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು:

ಇ) ದುರಸ್ತಿಗೊಳಗಾದ ಟ್ರಾನ್ಸ್‌ಫಾರ್ಮರ್‌ಗಳ ಬದಲಾವಣೆ ಸಮಯಕ್ಕೆ ಸರಿಯಾಗಿ ಆಗದೆ ಸಾರ್ವಜನಿಕರಿಗೆ ಅದರಲ್ಲೂ ವಿಶೇಷವಾಗಿ ರೈತರ ಪಂಪ್ ಸೆಟ್‌ಗಳಿಗೆ ಆಗುತ್ತಿರುವ ತೊಂದರೆ ನಿವಾರಣೆಗೆ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್. ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಹೌದು, ಗಮನಕ್ಕೆ ಬಂದಿರುತ್ತದೆ.

ಆ) ಟ್ರಾನ್ಸ್‌ಫಾರ್ಮರ್‌ಗಳ ವಿಫಲತೆಗೆ ಹಲವಾರು ಕಾರಣಗಳಿದ್ದು, ಅವುಗಳಲ್ಲಿ ಮುಖ್ಯವಾದವುಗಳೆಂದರೆ

1 ಅನಧಿಕೃತ ನೀರಾವರಿ ಪಂಪುಸೆಟ್ಟುಗಳ ಹೊರೆ.

2 ಅನಧಿಕೃತವಾಗಿ ರೈತರು ಪರಿವರ್ತಕಗಳ ಫ್ಯೂಜ್ ಬದಲಾವಣೆ ಮಾಡಿ ಅಲ್ಯುಮಿನಿಯಂ ತಂತಿಗಳನ್ನು ಉಪಯೋಗಿಸುತ್ತಿರುವುದು.

3 ಮಳೆ, ಗಾಳಿ ಇತ್ಯಾದಿ ಕಾರಣಗಳಿಂದ ಮರದ ಕೊಂಬೆಗಳು ಹೆಚ್.ಟಿ.ಎಲ್.ಟಿ. ಮಾರ್ಗಗಳ ಮೇಲೆ ಬಿದ್ದು ಶಾರ್ಟ್ ಸರ್ಕ್ಯೂಟ್ ಆಗುವುದರಿಂದ ಟ್ರಾನ್ಸ್‌ಫಾರ್ಮರ್‌ಗಳು ವಿಫಲಗೊಳ್ಳುತ್ತಿರುತ್ತವೆ.

4. ಟ್ರಾನ್ಸ್‌ಫಾರ್ಮರ್‌ಗಳು ಧೀರ್ಘ ಕಾಲದಿಂದ ಸೇವೆಯಲ್ಲಿರುವುದರಿಂದ.

ಇ) ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು ಹೊರಡಿಸಿರುವ ಪರ್ಫಾರ್ಮೆನ್ಸ್ ಸ್ಟಾಂಡರ್ಡ್ಸ್ ಪ್ರಕಾರವಾಗಿ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳು ವಿಫಲಗೊಂಡ ಸಂದರ್ಭದಲ್ಲಿ ನಗರ ಪ್ರದೇಶಗಳಲ್ಲಿ 24 ತಾಸು ಒಳಗಾಗಿ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ 72 ತಾಸುಗಳ ಒಳಗಾಗಿ ವಿಫಲಗೊಂಡ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು ಬದಲಾಯಿಸಬೇಕಾಗಿರುತ್ತದೆ. ಗ್ರಾಮೀಣ ಪ್ರದೇಶಗಳಲ್ಲಿ ವಿಫಲಗೊಂಡ ವಿತರಣಾ ಟ್ರಾನ್ಸ್‌ಫಾರ್ಮರ್‌ಗಳನ್ನು 72 ಗಂಟೆಗಳ ಒಳಗಾಗಿ ಬದಲಾಯಿಸಲು ಎಲ್ಲಾ ಪ್ರಯತ್ನಗಳನ್ನು ಮಾಡಲಾಗುತ್ತಿದೆ.

ಟ್ರಾನ್ಸ್‌ಫಾರ್ಮರ್‌ಗಳ ದುರಸ್ತಿಗಾಗಿ ಸರ್ಕಾರವು 60 ಕೋಟಿ ರೂ. ಗಳನ್ನು ವಿದ್ಯುತ್ ಸರಬರಾಜು ಕಂಪನಿಗಳಿಗೆ ಬಿಡುಗಡೆ ಮಾಡಿರುತ್ತದೆ. ರಾಜ್ಯದ ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಒಟ್ಟು ಮೂವತ್ತು ಟ್ರಾನ್ಸ್‌ಫಾರ್ಮರ್ ರಿಪೇರಿ ಕೇಂದ್ರಗಳಿವೆ. ಅವುಗಳ ಕಂಪನಿವಾರು ವಿವರ ಈ ಕೆಳಕಂಡಂತಿದೆ.

ಕ್ರಮ ಸಂಖ್ಯೆ	ಕಂಪನಿಯ ಹೆಸರು	ಟ್ರಾನ್ಸ್‌ಫಾರ್ಮರ್ ರಿಪೇರಿ ಕೇಂದ್ರಗಳ ಸಂಖ್ಯೆ
1	ಬೆ.ವಿ.ಸ.ಕಂ.	7
2	ಮ.ವಿ.ಸ.ಕಂ.	9
3	ಹು.ವಿ.ಸ.ಕಂ	7
4	ಗು.ವಿ.ಸ.ಕಂ	7
	ಒಟ್ಟು	**30**

ಈ ಕೇಂದ್ರಗಳಲ್ಲಿ ವಿಫಲಗೊಂಡ ಪರಿವರ್ತಕಗಳನ್ನು ತ್ವರಿತವಾಗಿ ರಿಪೇರಿಗೊಳಿಸಿ, ಬದಲಾಯಿಸಲಾಗುತ್ತಿದೆ.

ಅಲ್ಲದೇ, ವಿಫಲವಾದ ಟ್ರಾನ್ಸ್‌ಫಾರ್ಮರ್‌ಗಳ ದುರಸ್ತಿಯನ್ನು ಮತ್ತಷ್ಟು ತ್ವರಿತಗೊಳಿಸುವ ಸಲುವಾಗಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಮತ್ತು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಗಳು ತಲಾ 3 ಟ್ರಾನ್ಸ್‌ಫಾರ್ಮರ್ ದುರಸ್ತಿ ಕೇಂದ್ರಗಳನ್ನು ಹೆಚ್ಚುವರಿಯಾಗಿ ಸ್ಥಾಪಿಸಲು ಕ್ರಮ ತೆಗೆದುಕೊಳ್ಳುತ್ತಿವೆ.

677(1171) ಶ್ರೀ ಅಪ್ಪಾಸಾಹೇಬ್(ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ): ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ರಾಜ್ಯ ಸರ್ಕಾರಿ ನೌಕರರಿಗೆ ಐದನೇ ವೇತನ ಆಯೋಗ ರಚನೆ ಕುರಿತ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಆಯೋಗ ರಚಿಸಲಾಗಿದೆಯೇ;

ಇ) ಇಲ್ಲದಿದ್ದಲ್ಲಿ, ಆಯೋಗವನ್ನು ಎಂದು ರಚಿಸಲಾಗುವುದು?

ಶ್ರೀ ಸಿದ್ದರಾಮಯ್ಯ (ಉಪ ಮುಖ್ಯ ಮಂತ್ರಿಗಳು) :

ಅ) ಇದೆ.

ಆ) ಇಲ್ಲ.

ಇ) ಪೂರ್ವಭಾವಿ ಕ್ರಮಗಳನ್ನು ಶೀಘ್ರದಲ್ಲೇ ಕೈಗೊಳ್ಳಲಾಗುವುದು.

681(1590) ಶ್ರೀ ಅರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗೆ ಉತ್ತರಿಸುವರೇ?

ಅ) ತೀರ್ಥಹಳ್ಳಿ ತಾಲ್ಲೂಕು ನೊಣಬೂರು ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಯನ್ನು ಖಾಸಗಿಯವರ ಜಾಗದಲ್ಲಿ ಕಟ್ಟಿರುವುದರಿಂದ ಅವರಿಗೆ ಬದಲಿ ಜಾಗ ಕೊಡಲು ಶಿವಮೊಗ್ಗ ಜಿಲ್ಲಾಧಿಕಾರಿಗಳು ಕಳುಹಿಸಿದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹೌದಾದಲ್ಲಿ ಜಿಲ್ಲಾಧಿಕಾರಿಗಳು ಸರ್ಕಾರಕ್ಕೆ ಪ್ರಸ್ತಾವನೆ ಹಳಿಸಿದ್ದು ಯಾವಾಗ; ಇದುವರೆಗೂ ಸರ್ಕಾರ ಪರ್ಯಾಯ ಭೂಮಿ ನೀಡಲು ಅನುಮತಿ ನೀಡದಿರುವುದಕ್ಕೆ ಕಾರಣ ಏನು; ಅನುಮತಿಯನ್ನು ಯಾವಾಗ ನೀಡಲಾಗುವುದು;